ಕರ್ನಾಟಕ ಸರ್ಕಾರ

# ಭ್ರಷ್ಟಾಚಾರ ನಿಗ್ರಹ ದಳ

## ಪತ್ರಿಕಾ ಪ್ರಕಟಣೆ

ದಿನಾಂಕ: 14/12/2018.

ಬೆಂಗಳೂರು ನಗರ ಜಿಲ್ಲೆ, ಆನೇಕಲ್ ತಾಲ್ಲೂಕು, ಅತ್ತಿಬೆಲೆ ಹೋಬಳಿ, ನೆರಳೂರು ಗ್ರಾಮದ ನಿವಾಸಿಯೊಬ್ಬರು ತಮ್ಮ ಜಮೀನನ್ನು ಅಭಿವೃದ್ಧಿಪಡಿಸಲು 2011ನೇ ಸಾಲಿನಲ್ಲಿ ಮಾಡಿಕೊಂಡಿದ್ದ ಅಗ್ರಿಮೆಂಟ್ ಅನ್ನು ನ್ಯಾಯಾಲಯದ ಆದೇಶದ ಮೇರೆಗೆ ರದ್ದುಗೊಳಿಸಲು ಅತ್ತಿಬೆಲೆ ಸಬ್‌ರಿಜಿಸ್ಟ್ರಾರ್ ಕಛೇರಿಗೆ ಅರ್ಜಿ ಸಲ್ಲಿಸಿರುತ್ತಾರೆ. ಶ್ರೀ.ತಿಮ್ಮಾರೆಡ್ಡಿ, ಸಬ್ ರಿಜಿಸ್ಟ್ರಾರ್, ಅತ್ತಿಬೆಲೆ, ಆನೇಕಲ್ ತಾಲ್ಲೂಕು ರವರು ಅಗ್ರಿಮೆಂಟ್ ರದ್ದುಪಡಿಸಲು ರೂ.2,00,000/- ಗಳ ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ:14/12/2018 ರಂದು ಶ್ರೀ.ತಿಮ್ಮಾರೆಡ್ಡಿ, ಸಬ್ ರಿಜಿಸ್ಟ್ರಾರ್, ಅತ್ತಿಬೆಲೆ, ಆನೇಕಲ್ ತಾಲ್ಲೂಕು ರವರ ಪರವಾಗಿ ಶ್ರೀ.ಕುಮಾರ್ (ಮಧ್ಯವರ್ತಿ) ರವರು ರೂ.1,25,000/- ಲಂಚದ ಹಣವನ್ನು ಪಡೆದುಕೊಳ್ಳುವ ಸಂದರ್ಭದಲ್ಲಿ, ಬೆಂಗಳೂರು ಗ್ರಾಮಾಂತರ ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳಿಗೆ ಸಿಕ್ಕಿಬಿದ್ದಿರುತ್ತಾರೆ. ಇವರಿಬ್ಬರನ್ನೂ ದಸ್ತಗಿರಿ ಮಾಡಿ ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ. ತನಿಖೆ ಮುಂದುವರೆದಿದೆ.